All India Radio: Bangalore
National Bulletin In Kannada
14.04.2025 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಇಂದು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ; ದೇಶದ ವಿವಿಧೆಡೆ ಕಾರ್ಯಕ್ರಮ ಆಯೋಜನೆ
- ಪ್ರಧಾನಿ ನರೇಂದ್ರ ಮೋದಿ ಹರಿಯಾಣ ಪ್ರವಾಸ ; ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ
- ಡಾ. ಅಂಬೇಡ್ಕರ್ ನಗರ್ ಕೋಟಾ ನವದೆಹಲಿ ಎಕ್ಸ್‌ಪ್ರೆಸ್ ರೈಲಿಗೆ ಲೋಕಸಭಾ ಅಧ್ಯಕ್ಷ ಓಂ ಬಿರ್ಲಾ ಹಸಿರು ನಿಶಾನೆ
- ಐಪಿಎಲ್ ಟಿ-೨೦ ಕ್ರಿಕೆಟ್ ; ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಮುಂಬೈ ಇಂಡಿಯನ್ಸ್‌ಗೆ ೧೨ ರನ್‌ಗಳ ಜಯ

<><><><>

ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಮುನ್ನ ದಿನವಾದ ನಿನ್ನೆ ರಾಷ್ಟ್ರಪತಿ ದ್ರೌಪದಿ ಮುರ್ಮು, ದೇಶದ ಜನತೆಗೆ ಶುಭಾಶಯ ಕೋರಿದ್ದಾರೆ. ಅತ್ಯಂತ ಕಠಿಣ ಪರಿಸ್ಥಿತಿ ಹೊರತಾಗಿಯೂ ಬಾಬಾ ಸಾಹೇಬ್ ಅಂಬೇಡ್ಕರ್ ವಿಶಿಷ್ಟವಾದ ಛಾಪನ್ನು ಮೂಡಿಸಿದ್ದು, ಅವರ ಜೀವನ ಸ್ಫೂರ್ತಿದಾಯಕವಾಗಿದೆ. ವಿಶೇಷ ಸಾಧನೆಗಳಿಂದಾಗಿ ಜಗತ್ತಿನಾದ್ಯಂತ ಅವರು, ಗೌರವಕ್ಕೆ ಪಾತ್ರರಾಗಿದ್ದರು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ. ಬಾಬಾ ಸಾಹೇಬ್ ಅಂಬೇಡ್ಕರ್, ಅಸಾಮಾನ್ಯ ಸಾಮರ್ಥದೊಂದಿಗೆ ಬಹುಮುಖ ವ್ಯಕ್ತಿತ್ವ ಹೊಂದಿದ್ದರು. ಅವರು, ಅರ್ಥಶಾಸ್ತ್ರಜ್ಞ, ಶಿಕ್ಷಣ ತಜ್ಞ, ನ್ಯಾಯವಾದಿ ಹಾಗೂ ಮಹಾನ್ ಸಾಮಾಜಿಕ ಸುಧಾರಕರಾಗಿದ್ದರು. ಮಹಿಳೆಯರು ಹಾಗೂ ಶೋಷಿತ ವರ್ಗದವರ ಆರ್ಥಿಕ ಹಾಗೂ ಸಾಮಾಜಿಕ ಹಕ್ಕುಗಳಿಗಾಗಿ ಜೀವನವೀಡಿ ಹೋರಾಟ ನಡೆಸಿದ ಮಹಾನ್ ವ್ಯಕ್ತಿ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.

<><><><>

ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಸಂದರ್ಭದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಹರಿಯಾಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ.

ಈ ಕುರಿತು ಒಂದು ವರದಿ : ಅಭಯ್

ಪ್ರಧಾನಿ ನರೇಂದ್ರ ಮೋದಿ ಇಂದು ಹರಿಯಾಣದ ಹಿಸ್ಸಾರ್‌ನಲ್ಲಿ ಹಿಸ್ಸಾರ್-ಅಯೋಧ್ಯೆ ನಡುವಿನ ವಾಣಿಜ್ಯ ವಿಮಾನ ಯಾನಕ್ಕೆ ಹಸಿರು ನಿಶಾನೆ ತೋರಲಿದ್ದಾರೆ. ನಂತರ ಹಿಸ್ಸಾರ್ ವಿಮಾನ ನಿಲ್ದಾಣದ ಹೊಸ ಟರ್ಮಿನಲ್ ಕಟ್ಟಡಕ್ಕೆ ಶಂಕುಸ್ಥಾಪನೆ ನೆರವೇರಿಸುವರು. ನಂತರ ಯಮುನಾ ಸಾಗರದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಹಾಗೂ ಲೋಕಾರ್ಪಣೆ ನೆರವೇರಿಸಲಿದ್ದಾರೆ. ಪ್ರಧಾನಿಯವರು ಇದೇ ಸಂದರ್ಭದಲ್ಲಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡುವ ಕಾರ್ಯಕ್ರಮವಿದೆ. ವಿದ್ಯುಚ್ಛಕ್ತಿ ಮೂಲಸೌಕರ್ಯಕ್ಕೆ ಒತ್ತಾಸೆ ನೀಡುವ ದೀನ ಬಂಧು ಚೋಟು ರಾಮ್ ಶಾಖೋತ್ಪನ್ನ ವಿದ್ಯುತ್ ಸ್ಥಾವರದ ೮೦೦ ಮೆಗಾವ್ಯಾಟ್ ಸಾಮರ್ಥ್ಯದ ಆಧುನಿಕ ಶಾಖೋತ್ಪನ್ನ ಘಟಕಕ್ಕೆ ಶಿಲಾನ್ಯಾಸ ನೆರವೇರಿಸಲಿದ್ದಾರೆ. ಗೋಬರ್‌ಧನ್ ಯೋಜನೆ ಅನ್ವಯ ಮುಕರಾಬ್‌ಪುರದಲ್ಲಿ ಸಂಕುಚಿತ ಜೈವಿಕ ಅನಿಲ ಸ್ಥಾವರಕ್ಕೆ ಅಡಿಗಲ್ಲು ಇರಿಸಲಿದ್ದಾರೆ. ಭಾರತ್ ಮಾಲಾ ಪರಿ ಯೋಜನೆಯಡಿ ಒಂದು ಸಾವಿರದ ೭೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ೧೪.೪ ಕಿಲೋಮೀಟರ್ ರೇವಾರಿ ಬೈಪಾಸ್ ಯೋಜನೆಯನ್ನು ಪ್ರಧಾನಿಯವರು ಸೇವೆಗೆ ಸಮರ್ಪಿಸಲಿದ್ದಾರೆ.

<><><><>

ಸಂವಿಧಾನ ಶಿಲ್ಪಿ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ ೧೩೪ ನೇ ಜಯಂತಿಯಂದು ಇಂದು ದೇಶಾದ್ಯಂತ ಅವರಿಗೆ ಗೌರವ ಸಲ್ಲಿಸಲಾಗುತ್ತಿದೆ. ಇದರ ಅಂಗವಾಗಿ ದೇಶಾದ್ಯಂತ ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಿ ನರೇಂದ್ರ ಮೋದಿ, ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ಸಚಿವರು, ಸಂಸದರು ಮತ್ತು ಇತರ ಗಣ್ಯರು ಇಂದು ಬೆಳಿಗ್ಗೆ ಸಂಸತ್ ಭವನದ ಸಂಕೀರ್ಣದಲ್ಲಿರುವ ಬಾಬಾಸಾಹೇಬ್ ಪ್ರತಿಮೆಗೆ ಪುಷ್ಪ ನಮನ ಸಲ್ಲಿಸಲಿದ್ದಾರೆ. ಡಾ. ಭೀಮರಾವ್ ಅಂಬೇಡ್ಕರ್, ಸಮಾಜ ಸುಧಾರಕ, ಅರ್ಥಶಾಸ್ತ್ರಜ್ಞ, ರಾಜಕಾರಣಿಯಾಗಿ, ಜನರಿಗಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟಿದ್ದರು. ಬಾಬಾಸಾಹೇಬ್ ಡಾ. ಅಂಬೇಡ್ಕರ್, ಸಾಮಾಜಿಕ ಮತ್ತು ಜಾತಿ

ತಾರತಮ್ಯವನ್ನು ಕೊನೆಗೊಳಿಸಲು ತಮ್ಮ ಜೀವನದುದ್ದಕ್ಕೂ ಶ್ರಮಿಸಿದ್ದರು. ಸ್ವತಂತ್ರ ಭಾರತದ ಮೊದಲ ಕಾನೂನು ಮತ್ತು ನ್ಯಾಯ ಸಚಿವರಾಗಿದ್ದ ಅವರಿಗೆ ೧೯೯೦ ರಲ್ಲಿ ಮರಣೋತ್ತರವಾಗಿ ಭಾರತದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ ಭಾರತ ರತ್ನವನ್ನು ನೀಡಿ ಗೌರವಿಸಲಾಗಿದೆ.

<><><><>

ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ಮಧ್ಯಪ್ರದೇಶ ಮುಖ್ಯಮಂತ್ರಿ ಡಾ. ಮೋಹನ್ ಯಾದವ್ ಮತ್ತು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ನಿನ್ನೆ ಡಾ. ಅಂಬೇಡ್ಕರ್ ನಗರ-ಕೋಟಾ-ನವದೆಹಲಿ ಎಕ್ಸ್‌ಪ್ರೆಸ್‌ಗೆ ಹಸಿರು ನಿಶಾನೆ ತೋರಿದರು. ಓಂ ಬಿರ್ಲಾ ಕೋಟಾದಲ್ಲಿ ನಡೆದ ಸಮಾರಂಭದಲ್ಲಿ ಭಾಗವಹಿಸಿದ್ದರೆ, ಡಾ. ಮೋಹನ್ ಯಾದವ್ ಮತ್ತು ಅಶ್ವಿನಿ ವೈಷ್ಣವ್ ನವದೆಹಲಿಯಿಂದ ವೀಡಿಯೊ ಕಾನ್ಫರೆನ್ಸಿಂಗ್ ಮೂಲಕ ಪಾಲ್ಗೊಂಡರು. ಬಳಿಕ ಮಾತನಾಡಿದ ಓಂ ಬಿರ್ಲಾ, ರಾಜಸ್ಥಾನದ ಶಿಕ್ಷಣ ಕೇಂದ್ರ ಕೋಟಾ, ಆಧ್ಯಾತ್ಮಿಕ ಕೇಂದ್ರ ಉಜ್ಜಯಿನಿ, ಮಧ್ಯಪ್ರದೇಶದ ವಾಣಿಜ್ಯ ಕೇಂದ್ರ ಇಂದೋರ್‌ಗೆ ಈ ರೈಲು ಪ್ರಯೋಜನವಾಗಲಿದೆ ಎಂದರು.

ಧ್ವನಿ : ಓಂ ಬಿರ್ಲಾ (೨೨ ಸೆಕೆಂಡ್‌ಗಳು)

ತಮ್ಮ ಭಾಷಣದಲ್ಲಿ ಸಚಿವ ಅಶ್ವಿನಿ ವೈಷ್ಣವ್, ದೇಶದ ಹಲವಾರು ನಿರ್ಣಾಯಕ ಸ್ಥಳಗಳನ್ನು ಸಂಪರ್ಕಿಸುವ ಪ್ರಮುಖ ರೈಲು ಇದಾಗಿದೆ. ಈ ರೈಲಿನೊಂದಿಗೆ, ರೈಲ್ವೆ ಸಚಿವಾಲಯ ೨೦೨೮ ರ ಉಜ್ಜಯಿನಿ ಕುಂಭಮೇಳಕ್ಕೆ ಸಿದ್ಧತೆಗಳನ್ನು ಪ್ರಾರಂಭಿಸಿದೆ. ರೈಲ್ವೆ ಯೋಜನೆಗಳಿಗಾಗಿ ಮಧ್ಯಪ್ರದೇಶಕ್ಕೆ ೧೪ ಸಾವಿರದ ೭೪೫ ಕೋಟಿ ರೂಪಾಯಿಗಳನ್ನು ಮತ್ತು ರಾಜಸ್ಥಾನಕ್ಕೆ ೯ ಸಾವಿರದ ೯೭೦ ಕೋಟಿ ರೂಪಾಯಿಗಳನ್ನು ಆಯವ್ಯಯದಲ್ಲಿ ಹಂಚಿಕೆ ಮಾಡಲಾಗಿದೆ ಎಂದು ಹೇಳಿದರು.

ಧ್ವನಿ : ಅಶ್ವಿನಿ ವೈಷ್ಣವ್ (೧೮ ಸೆಕೆಂಡ್‌ಗಳು)

<><><><>

೨೦೨೫ರ ಮಾರ್ಚ್ ೩೧ ಕ್ಕೆ ಕೊನೆಗೊಂಡ ಹಣಕಾಸು ವರ್ಷದಲ್ಲಿ ಏಪ್ರಿಲ್ ನಿಂದ ಡಿಸೆಂಬರ್ ವರೆಗೆ ಭಾರತದ ಔಷಧ ಮತ್ತು ವೈದ್ಯಕೀಯ ಸಾಧನಗಳ ವಲಯ ೧೧ ಸಾವಿರದ ೮೮೮ ಕೋಟಿ ರೂಪಾಯಿಗಳಷ್ಟು ವಿದೇಶಿ ನೇರ ಹೂಡಿಕೆಯನ್ನು ಆಕರ್ಷಿಸಿದೆ. ಇದಲ್ಲದೆ, ೨೦೨೪-೨೫ರ ಅವಧಿಯಲ್ಲಿ ಬ್ರೌನ್‌ಫೀಲ್ಡ್ ಯೋಜನೆಗಳಿಗೆ ಸುಮಾರು ೭ ಸಾವಿರದ ೨೪೬ ಕೋಟಿ ರೂಪಾಯಿಗಳ ಮೌಲ್ಯದ ೧೩ ಎಫ್‌ಡಿಐ ವಿದೇಶಿ ನೇರ ಹೂಡಿಕೆ ಪ್ರಸ್ತಾವನೆಗಳನ್ನು

ಅನುಮೋದಿಸಲಾಗಿದ್ದು, ಆ ಮೂಲಕ ಒಟ್ಟು ಎಫ್‌ಡಿಐ  ೧೯ ಸಾವಿರದ ೧೩೪.೪ ಕೋಟಿ ರೂಪಾಯಿಗಳಿಗೆ ತಲುಪಿದೆ ಎಂದು ಔಷಧ ಇಲಾಖೆ ಸಂಗ್ರಹಿಸಿದ ಅಂಕಿಅಂಶಗಳ ಮೂಲಕ ತಿಳಿದು ಬಂದಿದೆ. ಅಧಿಕೃತ ಹೇಳಿಕೆಯ ಪ್ರಕಾರ, ಸರ್ಕಾರದ ಉತ್ಪಾದನೆ ಸಂಬಂಧಿತ ಪ್ರೋತ್ಸಾಹಕ ಯೋಜನೆ - ಪಿಎಲ್‌ಐ ದೇಶೀಯ ಉತ್ಪಾದನೆಯನ್ನು ಉತ್ತೇಜಿಸಲು, ಹೂಡಿಕೆಗಳನ್ನು ಆಕರ್ಷಿಸಲು, ಆಮದುಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ಮತ್ತು ರಫ್ತುಗಳನ್ನು ಹೆಚ್ಚಿಸಲು ಒಂದು ಪರಿವರ್ತಕ ಉಪಕ್ರಮವಾಗಿ ಹೊರಹೊಮ್ಮಿದೆ. ದೊಡ್ಡ ಪ್ರಮಾಣದ ಔಷಧಗಳಿಗಾಗಿ ಪಿಎಲ್‌ಐ ಯೋಜನೆಯಡಿಯಲ್ಲಿ, ಒಟ್ಟು ೪೮ ಯೋಜನೆಗಳನ್ನು ಆಯ್ಕೆ ಮಾಡಲಾಗಿದೆ.

<><><>

ಭಾರತ ಮೊದಲ ಬಾರಿಗೆ ೩೦ ಕಿಲೋವ್ಯಾಟ್ ಲೇಸರ್ ಆಧಾರಿತ ಶಸ್ತ್ರಾಸ್ತ್ರ ವ್ಯವಸ್ಥೆಯನ್ನು ಬಳಸಿಕೊಂಡು ಸ್ಥಿರ-ರೆಕ್ಕೆಯ ವಿಮಾನಗಳು, ಕ್ಷಿಪಣಿಗಳು ಮತ್ತು ಸಮೂಹ ಡ್ರೋನ್‌ಗಳನ್ನು ಹೊಡೆದುರುಳಿಸುವ ಸಾಮರ್ಥ್ಯವನ್ನು ಪ್ರದರ್ಶಿಸಿದೆ. ಆ ಮೂಲಕ ಈ ಸಾಮರ್ಥ್ಯವನ್ನು ಪ್ರದರ್ಶಿಸಿದ ಅಮೆರಿಕ, ಚೀನಾ ಮತ್ತು ರಷ್ಯಾ ಸೇರಿದಂತೆ ಆಯ್ದ ದೇಶಗಳ ಪಟ್ಟಿಗೆ ಭಾರತ ಸೇರಿದೆ. ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಯ ಪ್ರಮುಖ ಕೇಂದ್ರವಾದ ಹೈದರಾಬಾದ್‌ನ ಸೆಂಟರ್ ಫಾರ್ ಹೈ ಎನರ್ಜಿ ಸಿಸ್ಟಮ್ಸ್ & ಸೈನ್ಸಸ್ ನಿನ್ನೆ  ಆಂಧ್ರಪ್ರದೇಶದ ಕರ್ನೂಲ್‌ನಲ್ಲಿ ಲೇಸರ್ ನಿರ್ದೇಶಿತ ಶಸ್ತ್ರಾಸ್ತ್ರ - ಡಿಇಡಬ್ಲ್ಯೂ ಭೂ ಆವೃತ್ತಿಯ, ಯಶಸ್ವಿ ಕ್ಷೇತ್ರ ಪ್ರದರ್ಶನವನ್ನು ನಡೆಸಿತು.  ಸ್ಥಿರ-ರೆಕ್ಕೆ ಮಾನವರಹಿತ ವೈಮಾನಿಕ ವಾಹನ ಮತ್ತು ಸ್ವಾರ್ಮ್ ಡ್ರೋನ್‌ಗಳನ್ನು ಯಶಸ್ವಿಯಾಗಿ ಕಾರ್ಯಾಚರಣೆ ನಡೆಸಿದೆ. ಈ ಯಶಸ್ವಿ ಪ್ರಯೋಗದೊಂದಿಗೆ, ಭಾರತವು ಹೆಚ್ಚಿನ ಶಕ್ತಿಯ ಲೇಸರ್ ಡಿಇಡಬ್ಲ್ಯೂ ವ್ಯವಸ್ಥೆಯನ್ನು ಹೊಂದಿರುವ ಜಾಗತಿಕ ರಾಷ್ಟ್ರಗಳ ಪಟ್ಟಿಗೆ ಸೇರ್ಪಡೆಗೊಂಡಿದೆ ಎಂದು ಡಿಆರ್‌ಡಿಒ ತಿಳಿಸಿದೆ. ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ಮತ್ತು ಡಿಆರ್‌ಡಿಒ ಅಧ್ಯಕ್ಷ ಡಾ. ಸಮೀರ್ ವಿ ಕಾಮತ್, ಡಿಆರ್‌ಡಿಒ ಹೆಚ್ಚಿನ ಶಕ್ತಿಯ ಮೈಕ್ರೋವೇವ್‌ಗಳು, ವಿದ್ಯುತ್ಕಾಂತೀಯ ಪಲ್ಸ್‌ನಂತಹ ಇತರ ಹೆಚ್ಚಿನ ಶಕ್ತಿಯ ವ್ಯವಸ್ಥೆಗಳು ಮತ್ತು ಸ್ಟಾರ್ ವಾರ್ಸ್ ಸಾಮರ್ಥ್ಯವನ್ನು ನೀಡುವ ಹಲವಾರು ತಂತ್ರಜ್ಞಾನಗಳ ಮೇಲೂ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

<><><>

ಮುಂದಿನ ಒಂದೆರಡು ತಿಂಗಳಲ್ಲಿ ಸ್ಮಾರ್ಟ್‌ಫೋನ್, ಕಂಪ್ಯೂಟರ್, ಸೆಮಿಕಂಡಕ್ಟರ್ ಮತ್ತು ಇತರ ಘಟಕಗಳ ಆಮದಿನ ಮೇಲೆ ಅಮೆರಿಕ ಪ್ರತ್ಯೇಕ ಸುಂಕ ವಿಧಿಸಲಿದೆ ಎಂದು ಅಮೆರಿಕದ ವಾಣಿಜ್ಯ ಕಾರ್ಯದರ್ಶಿ ಹೊವಾರ್ಡ್ ಲುಟ್ನಿಕ್ ಹೇಳಿದ್ದಾರೆ. ಕಳೆದ ರಾತ್ರಿ ಸುದ್ದಿಸಂಸ್ಥೆಯೊಂದಿಗೆ ಮಾತನಾಡಿದ ಅವರು, ದಕ್ಷಿಣ ಏಷ್ಯಾದ ರಾಷ್ಟ್ರಗಳಿಂದ ಆಮದುಗಳನ್ನು ಅವಲಂಬಿಸಿರುವುದಕ್ಕೆ ಹೋಲಿಸಿದರೆ ಅಮೆರಿಕದಲ್ಲಿ ಚಿಪ್‌ಗಳು ಮತ್ತು ಫ್ಲಾಟ್-ಪ್ಯಾನಲ್ ಟೆಲಿವಿಷನ್‌ಗಳನ್ನು ನಿರ್ಮಿಸುವ ಅಗತ್ಯವಿದೆ. ಈ ಎಲ್ಲಾ ಉತ್ಪನ್ನಗಳು ಸೆಮಿಕಂಡಕ್ಟರ್‌ಗಳ ಅಡಿಯಲ್ಲಿ ಬರಲಿವೆ ಎಂದು ಹೇಳಿದರು. ಅರೆವಾಹಕಗಳು ಸೇರಿದಂತೆ ವಿದ್ಯುನ್ಮಾನ್ ವಸ್ತುಗಳ ಆಮದುಗಳನ್ನು ಪ್ರತಿ ಸುಂಕಗಳಿಂದ ಅಮೆರಿಕ ವಿನಾಯಿತಿ ನೀಡಿದ ಒಂದು ದಿನದ ನಂತರ ಈ ಕ್ರಮ ಕೈಗೊಳ್ಳಲಾಗಿದೆ.

<><><><>

ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಮುಂಬೈ ಇಂಡಿಯನ್ಸ್ ತಂಡ ೧೨ ರನ್‌ಗಳ ಜಯ ದಾಖಲಿಸಿದೆ. ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಮುಂಬೈ ತಂಡ ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೨೦೫ ರನ್ ಗಳಿಸಿತು. ಇದಕ್ಕೆ ಉತ್ತರವಾಗಿ ಡೆಲ್ಲಿ ಕ್ಯಾಪಿಟಲ್ಸ್ ೧೯ ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು ೧೯೩ ರನ್ ಗಳಿಸಲಷ್ಟೆ ಶಕ್ತವಾಯಿತು. ರಾಜಸ್ಥಾನದಲ್ಲಿ ನಿನ್ನೆ ನಡೆದ ಮೊದಲ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ರಾಜಸ್ಥಾನ ರಾಯಲ್ಸ್ ತಂಡವನ್ನು ೯ ವಿಕೆಟ್‌ಗಳಿಂದ ಪರಾಭವಗೊಳಿಸಿತು. ಇಂದು ಉತ್ತರ ಪ್ರದೇಶದ ಏಕಾನ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿರುವ ಪಂದ್ಯದಲ್ಲಿ ಲಖನೌ ಸೂಪರ್ ಜೈಂಟ್ಸ್ ಹಾಗೂ ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>